# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿನ ಪ್ರಶ್ನೆ ಸಂಖ್ಯೆ | : | 1003 |
| ಮಾನ್ಯ ಸದಸ್ಯರ ಹೆಸರು | : | ಡಾ: ತಳವಾರ್ ಸಾಬಣ್ಣ (ನಾಮ ನಿರ್ದೇಶನ ಹೊಂದಿದವರು) |
| ಉತ್ತರಿಸಬೇಕಾದ ಸಚಿವರು | : | ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಹಾಗೂ ವೈದ್ಯಕೀಯ ಶಿಕ್ಷಣ ಸಚಿವರು |
| ಉತ್ತರಸಬೇಕಾದ ದಿನಾಂಕ | : | 27/12/2022 |

| ಕ್ರ.ಸಂ | ಪ್ರಶ್ನೆ | ಉತ್ತರ |
|---|---|---|
| ಅ) | ಉತ್ತರ ಕರ್ನಾಟಕ ಭಾಗದಲ್ಲಿ ಶಿಶು ಮತ್ತು ತಾಯಂದಿರ ಮರಣ ಪ್ರಮಾಣ ಏರುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ? | ಬಂದಿದೆ. |
| ಆ) | ಅಂಕಿ ಅಂಶಗಳ ಪ್ರಕಾರ ಅಪೌಷ್ಠಿಕತೆ ಮತ್ತು ಕಲುಷಿತ ಅಹಾರ ಸೇವನೆಯೇ ಕಾರಣ ತಿಳಿದು ಬಂದಿದ್ದು ಈ ಬಗ್ಗೆ ಸರ್ಕಾರ ಕೈಗೊಂಡ ಕ್ರಮಗಳೇನು: | ಸರ್ಕಾರವು ಗರ್ಭಿಣಿಯರು ಹಾಗೂ ಬಾಣಂತಿಯವರಿಗೆ ಪೌಷ್ಠಿಕತೆ ಹೆಚ್ಚಿಸಲು ಕೈಗೊಂಡ ಕ್ರಮಗಳ ವಿವರಗಳನ್ನು **ಅನುಬಂಧ-1ರಲ್ಲಿ** ನೀಡಲಾಗಿದೆ. |
| ಇ) | ಸರ್ಕಾರ ಕಠಿಣ ಕಾನೂನು ಇದ್ದರು ಹೆಣ್ಣು ಭ್ರೂಣ ಹತ್ಯೆ ನಡೆಯುತ್ತಿರುವುದು ಕಳವಳಕಾರಿ ವಿಷಯವಾಗಿದ್ದು ಈ ಬೆಳವಣಿಗೆ ಬಗ್ಗೆ ನಿಗಾವಹಿಸಲು ಸರ್ಕಾರ ಕೈಗೊಂಡ ಕ್ರಮವೇನು; | ಕರ್ನಾಟಕ ಸರ್ಕಾರವು ಗರ್ಭಪೂರ್ವ ಮತ್ತು ಪ್ರಸವ ಪೂರ್ವ ಭ್ರೂಣ ಲಿಂಗ ಪತ್ತೆ ತಂತ್ರ ವಿಧಾನಗಳು (ಲಿಂಗ ಆಯ್ಕೆ ನಿಷೇಧ) ಕಾಯ್ದೆಯನ್ನು ಪರಿಣಾಮಕಾರಿಯಾಗಿ ಅನುಷ್ಠಾನಗೊಳಿಸುತ್ತಿದ್ದು, ಹೆಣ್ಣು ಭ್ರೂಣ ಹತ್ಯೆ ನಡೆಯದಂತೆ ಕೈಗೊಳ್ಳಲಾಗುತ್ತಿರುವ ಕ್ರಮಗಳ ವಿವರಗಳನ್ನು **ಅನುಬಂಧ-2ರಲ್ಲಿ** ನೀಡಲಾಗಿದೆ. |
| ಈ) | ಹೊರರಾಜ್ಯಗಳಾದ ಮಹಾರಾಷ್ಟ್ರ, ತಮಿಳುನಾಡು ಮತ್ತು ಆಂಧ್ರ ಗಡಿಭಾಗಕ್ಕೆ ಹೋಗಿ ಭ್ರೂಣ ಪರೀಕ್ಷೆ ಕಾರ್ಯ ನಡೆಯುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿಲ್ಲವೇ; ಇದನ್ನು ತಡೆಯಲು ಕೈಗೊಂಡ ಕ್ರಮಗಳೇನು ? | ಬಂದಿದೆ.<br>ಪಿ.ಸಿ&ಪಿ.ಎನ್.ಡಿ.ಟಿ. ಕಾಯ್ದೆಯಡಿ ಕರ್ನಾಟಕ ರಾಜ್ಯ ಮಟ್ಟದ ಅಧಿಕಾರಿಗಳಿಗೆ ನೆರೆ-ಹೊರೆ ರಾಜ್ಯಗಳಿಗೆ ಹೋಗಿ ತಪಾಸಣೆ ನಡೆಸುವ ಅನುಮತಿ ಇಲ್ಲದಿರುವುದರಿಂದ, ಕೇಂದ್ರ ಸರ್ಕಾರದ ತಪಾಸಣಾ ಅಧಿಕಾರಿಗಳು ಸಹಯೋಗ ಹಾಗೂ ಆಂಧ್ರಪ್ರದೇಶದ ಅಧಿಕಾರಿಗಳೊಂದಿಗೆ ದಿನಾಂಕ: 18-10-2022ರಂದು ಕರ್ನಾಟಕ ಮತ್ತು ಆಂಧ್ರ ಪ್ರದೇಶದ ಗಡಿ ಭಾಗದ ಜಿಲ್ಲೆಯಾದ ಅನಂತಪುರ ಜಿಲ್ಲೆಗೆ ಭೇಟಿ ನೀಡಿ, ಆಂಧ್ರಪ್ರದೇಶದ ಅಧಿಕಾರಿಗಳು ಒಟ್ಟು 02 ಸ್ಕ್ಯಾನಿಂಗ್ ಸೆಂಟರ್‌ಗಳನ್ನು ಸೀಜ್ ಮಾಡಲಾಗಿದೆ. |

ಕಡತ ಸಂಖ್ಯೆ: ಆಕುಕ 1003 ಚುಗುಪ್ರ 2022

(ಡಾ|| ಕೆ. ಸುಧಾಕರ್)
ಆರೋಗ್ಯ ಮತ್ತು ಕುಟುಂಬ ಕಲ್ಯಾಣ
ಹಾಗೂ ವೈದ್ಯಕೀಯ ಶಿಕ್ಷಣ ಸಚಿವರು

# ಅನುಬಂಧ-1

ಸರ್ಕಾರವು ಗರ್ಭಿಣಿಯರು ಹಾಗೂ *ಬಾಣಂತಿಯವರಿಗೆ* ಪೌಷ್ಟಿಕತೆ ಹೆಚ್ಚಿಸಲು ಕೆಳಕಂಡ ಕ್ರಮಗಳನ್ನು ಕೈಗೊಳ್ಳಲಾಗಿದೆ.

1. ಗರ್ಭಿಣಿಯರ ಪ್ರಸವ ಪೂರ್ವ ಆರೈಕೆ ಮತ್ತು ಬಾಣಂತಿಯರಲ್ಲಿ ರಕ್ತ ಹೀನತೆಯನ್ನು ಪತ್ತೆ ಹಚ್ಚಲು ಪರೀಕ್ಷಿಸಲಾಗುತ್ತಿದೆ.
2. ರಕ್ತ ಹೀನತೆಯನ್ನು ಆರೋಗ್ಯ ಕೇಂದ್ರಗಳ, ಉಪ ಕೇಂದ್ರಗಳ ಆಸ್ಪತ್ರೆಗಳಲ್ಲಿ ಹಾಗೂ ಸಮುದಾಯ ಮಟ್ಟದಲ್ಲಿ ಪತ್ತೆ ಹಚ್ಚಲಾಗುತ್ತಿದೆ.
3. ಕಿರಿಯ ಮಹಿಳಾ ಆರೋಗ್ಯ ಸಹಾಯಕಿಯರಿಗೆ ಡಿಜಿಟಲ್ ಹಿಮೋಗ್ಲೋಬಿನೋಮೀಟರ್ ಕೊಡಿಸಲಾಗಿದ್ದು, ಇದರಿಂದ ಕೆಳಹಂತದಲ್ಲಿ ಬಹುಬೇಗನೆ ರಕ್ತಹೀನತೆಯನ್ನು ಪತ್ತೆ ಹಚ್ಚಲಾಗುತ್ತಿದೆ'
4. ತೀವ್ರತರ ರಕ್ತಹೀನತೆಯಿಂದ ಬಳಲುತ್ತಿರುವ ಗರ್ಭಿಣಿ ಮತ್ತು ಬಾಣಂತಿಯರಿಗೆ JSSK ಕಾರ್ಯಕ್ರಮದಡಿಯಲ್ಲಿ ಉಚಿತ Blood Transfusion ವ್ಯವಸ್ಥೆ ಮಾಡಲಾಗಿದೆ.
5. ಮೃದು ರಕ್ತ ಹೀನತೆಯಿಂದ ಬಳಲುತ್ತಿರುವ ಗರ್ಭಿಣಿ ಮತ್ತು ಬಾಣಂತಿಯರಿಗೆ ದಿನಕ್ಕೆ 2 ಬಾರಿಯಂತೆ ಒಟ್ಟು 12 ತಿಂಗಳಿಗೆ 720 IFA ಮಾತ್ರೆಗಳನ್ನು ಎಲ್ಲಾ ಸರ್ಕಾರಿ ಆಸ್ಪತ್ರೆಗಳಲ್ಲಿ ನೀಡಲಾಗುತ್ತಿದೆ. ರಕ್ತ ವೃದ್ಧಿಸುವ ಈ ಮಾತ್ರೆಗಳನ್ನು ಕಿರಿಯ ಮಹಿಳಾ ಆರೋಗ್ಯ ಸಹಾಯಕಿಯರು ಮತ್ತು ಆಶಾ ಕಾರ್ಯಕರ್ತೆಯರಿಂದಲೂ ವಿತರಿಸಲಾಗುತ್ತಿದೆ.
6. ರಕ್ತ ಹೀನತೆಯನ್ನು ತಡೆಗಟ್ಟಲು ರಾಷ್ಟ್ರೀಯ ಜಂತುಹುಳು ನಿವಾರಣಾ ಕಾರ್ಯಕ್ರಮದಲ್ಲಿ ಉಚಿತವಾಗಿ ಎಲ್ಲಾ ಗರ್ಭಿಣಿಯರಿಗೂ ಮತ್ತು ಬಾಣಂತಿಯರಿಗೂ 400mg Albendozole ಮಾತ್ರೆಗಳನ್ನು ನೀಡಲಾಗುತ್ತದೆ.
7. ರಕ್ತ ಹೀನತೆಯನ್ನು ನಿವಾರಿಸಲು Iron Sucrose ಇಂಜಕ್ಷನ್ ಗಳನ್ನು ನೀಡಲಾಗುತ್ತಿದೆ. ತೀವ್ರತರ ರಕ್ತ ಹೀನತೆಯಿಂದ ಬಳಲುತ್ತಿರುವ ಪ್ರತಿ ಗರ್ಭಿಣಿ/ಬಾಣಂತಿಗೆ 10 Ampoules Iron Sucrose ಇಂಜಕ್ಷನ್‌ಗಳು ಸರಾಸರಿಯಾಗಿ ನೀಡಲಾಗುತ್ತಿದೆ.

8. ಬಾಣಂತಿಯರಲ್ಲಿ ಅಪೌಷ್ಟಿಕತೆಯನ್ನು ಹೋಗಲಾಡಿಸಲು ಹೆರಿಗೆ ಆದ ಕೂಡಲೇ ರೂ.600/700 ಜನನಿ ಶಿಶು ಸುರಕ್ಷಾ ಯೋಜನೆ (JSY) ಅಡಿಯಲ್ಲಿ ಬಿ.ಪಿ.ಎಲ್ ಫಲಾನುಭವಿಗಳಿಗೆ ನೀಡಲಾಗುತ್ತಿದೆ.

27.12.22

ಆಯುಕ್ತರು

ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸೇವೆಗಳು

ಬೆಂಗಳೂರು

# ಅನುಬಂಧ-2

ಕರ್ನಾಟಕ ಸರ್ಕಾರವು ಗರ್ಭಪೂರ್ವ ಮತ್ತು ಪ್ರಸವ ಪೂರ್ವ ಭ್ರೂಣ ಲಿಂಗ ಪತ್ತೆ ತಂತ್ರವಿಧಾನಗಳು (ಲಿಂಗ ಆಯ್ಕೆ ನಿಷೇಧ) ಕಾಯ್ದೆಯನ್ನು ಪರಿಣಾಮಕಾರಿ ಅನುಷ್ಠಾನಗೊಳಿಸುತ್ತಿದ್ದು, ಹೆಣ್ಣು ಭ್ರೂಣ ಹತ್ಯೆ ನಡೆಯದಂತೆ ಕೆಳಕಾಣಿಸಿದಂತೆ ಕ್ರಮಕೈಗೊಳ್ಳುತ್ತಿದೆ.

- ಪಿ.ಸಿ&ಪಿ.ಎನ್.ಡಿ.ಟಿ. ಕಾಯ್ದೆಯಡಿ ಬರುವ ಎಲ್ಲಾ ಶಾಸನಬದ್ಧ ಸಮಿತಿಗಳು ರಾಜ್ಯ ಮತ್ತು ಜಿಲ್ಲೆಗಳಲ್ಲಿ ರಚನೆಗೊಂಡಿರುತ್ತದೆ.
- ಒಟ್ಟು 6068 ಸ್ಕ್ಯಾನಿಂಗ್ ಸೆಂಟರ್‌ಗಳು ನೋಂದಣಿ ಗೊಂಡಿದ್ದು, 5746 ಖಾಸಗಿ ಸ್ಕ್ಯಾನಿಂಗ್ ಸೆಂಟರ್‌ಗಳು ಮತ್ತು 322 ಸರ್ಕಾರಿ ಸ್ಕ್ಯಾನಿಂಗ್ ಸೆಂಟರ್‌ಗಳು ನೋಂದಣಿಯಾಗಿರುತ್ತದೆ.
- 2022-23 ನೇ ಸಾಲಿನಲ್ಲಿ ರಾಜ್ಯ ಮಟ್ಟದಿಂದ ಒಟ್ಟು 16 ಸ್ಕ್ಯಾನಿಂಗ್ ಸೆಂಟರ್ ಗಳನ್ನು ತಪಾಸಣೆ ಮಾಡಿದ್ದು, 7 ಸ್ಕ್ಯಾನಿಂಗ್ ಸೆಂಟರ್‌ಗಳ ವಿರುದ್ಧ ಈಗಾಗಲೇ ನ್ಯಾಯಾಲಯದಲ್ಲಿ ಪ್ರಕರಣವನ್ನು ದಾಖಲಿಸಲಾಗಿದ್ದು, ಉಳಿದ ಸೆಂಟರ್‌ಗಳಿಗೆ ನೋಟೀಸು ನೀಡಲಾಗಿದೆ ಹಾಗೂ ಜಿಲ್ಲಾ ಮಟ್ಟದಲ್ಲಿ ಒಟ್ಟು 3414 ಸ್ಕ್ಯಾನಿಂಗ್ ಸೆಂಟರ್‌ಗಳಿಗೆ ಭೇಟಿ ನೀಡಿ ಪರಿಶೀಲಿಸಲಾಗಿದೆ.
- ರಾಜ್ಯದಲ್ಲಿ ಇದುವರೆಗೂ ಪಿ.ಸಿ&ಪಿ.ಎನ್.ಡಿ.ಟಿ. ಕಾಯ್ದೆಯನ್ನು ಉಲ್ಲಂಘಿಸಿರುವ ಸ್ಕ್ಯಾನಿಂಗ್ ಸೆಂಟರ್ / ಮಾಲೀಕರು/ ವೈದ್ಯರ ವಿರುದ್ಧ ಒಟ್ಟು 90 ಪ್ರಕರಣಗಳನ್ನು ನ್ಯಾಯಾಲಯದಲ್ಲಿ ದಾವೆ ಹೂಡಲಾಗಿದ್ದು, 56 ಪ್ರಕರಣಗಳಲ್ಲಿ ದಂಡವಿಧಿಸಿ ಖಿಲಾಸೆಗೊಳಿಸಿದ್ದು, 34 ಪ್ರಕರಣಗಳು ನ್ಯಾಯಾಲಯದಲ್ಲಿ ವಿವಿಧ ಹಂತದಲ್ಲಿ ಬಾಕಿಯಿರುತ್ತದೆ.
- ರಾಜ್ಯದಿಂದ "ಬಾಲಿಕಾ"ಆನ್‌ಲೈನ್ ಸಾಫ್ಟ್‌ವೇರ್‌ಅನ್ನು ಆವಿಷ್ಕಾರಿಸಿ, ಎಲ್ಲಾ ಸ್ಕ್ಯಾನಿಂಗ್ ಸೆಂಟರ್‌ಗಳು "ಬಾಲಿಕಾ" ಆನ್‌ಲೈನ್ ಸಾಫ್ಟ್‌ವೇರ್ ಮುಖಾಂತರ ಕಡ್ಡಾಯವಾಗಿ ನೋಂದಾಯಿಸಿದ್ದು, ಆನ್‌ಲೈನ್ ಮುಖಾಂತರ ಎಫ್-ಫಾರಂ ಗಳನ್ನು ಜಿಲ್ಲೆ ಮತ್ತು ರಾಜ್ಯಕ್ಕೆ ಸಲ್ಲಿಸಲಾಗಿರುತ್ತದೆ.
- ತರಬೇತಿ ಹೊಂದಿರದ ಅಥವಾ ತಜ್ಞರಲ್ಲದ ವೈದ್ಯರನ್ನು ನಿಯಂತ್ರಿಸುವ ಸಲುವಾಗಿ, ಗರ್ಭಪೂರ್ವ ಮತ್ತು ಪ್ರಸವಪೂರ್ವ ಪತ್ತೆ ತಂತ್ರ ವಿಧಾನಗಳು (ಲಿಂಗ ಆಯ್ಕೆ ನಿಷೇಧ) (ಆರು ತಿಂಗಳ ತರಬೇತಿ) ನಿಯಮಗಳು, 2014 ರ ಪ್ರಕಾರ ಎಂ.ಬಿ.ಬಿ.ಎಸ್ ಪದವಿ ಹೊಂದಿ ಸ್ಕ್ಯಾನಿಂಗ್ ಸೆಂಟರ್ ನಡೆಸುತ್ತಿರುವ ವೈದ್ಯರಿಗೆ ಸಾಮರ್ಥ್ಯ ಆಧಾರಿತ ಪರೀಕ್ಷೆ (**Competency Based Test**) ಮತು ತರಬೇತಿಯನ್ನು ವೈದ್ಯಕೀಯ ಶಿಕ್ಷಣ ಇಲಾಖೆಯ ಸಹಯೋಗದೊಂದಿಗೆ ನಡೆಸಲಾಗುತ್ತಿದೆ. ಈಗಾಗಲೇ 198 ವೈದ್ಯರು ಈ ಪರೀಕ್ಷೆಯಲ್ಲಿ ತೇರ್ಗಡೆ ಹೊಂದಿರುತ್ತಾರೆ.
- ಅಲ್ಟ್ರಾಸೌಂಡ್ ತಯಾರಕರು, ಮಾರಾಟಗಾರರು, ರಿಪೇರಿ ಮಾಡುವವರನ್ನು ರಾಜ್ಯ ಮಟ್ಟದಲ್ಲಿ ನೋಂದಾಯಿಸಿ, ತ್ರೈಮಾಸಿಕ ವರದಿಯನ್ನು ಪಡೆಯಲಾಗುತ್ತಿದೆ.
- ಕೇಂದ್ರ ಸರ್ಕಾರದಿಂದ ತರಬೇತುದಾರರನ್ನು ಕರೆಸಿ ರಾಜ್ಯ ಮಟ್ಟದಿಂದ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿಗಳು, ಜಿಲ್ಲಾ ಕುಟುಂಬ ಕಲ್ಯಾಣಾಧಿಕಾರಿಗಳು, ಜಿಲ್ಲಾ ಪಿ.ಸಿ&ಪಿ.ಎನ್.ಡಿ.ಟಿ. ವಿಷಯ ನಿರ್ವಾಹಕರಿಗೆ ಪಿ.ಸಿ&ಪಿ.ಎನ್.ಡಿ.ಟಿ. ಕಾಯ್ದೆಯ ಕುರಿತಾಗಿ ಅರಿವು ಮೂಡಿಸುವ ಕಾರ್ಯಗಾರವನ್ನು ಏರ್ಪಡಿಸಲಾಗಿದೆ.
- ಹೆಣ್ಣು ಭ್ರೂಣ ಪತ್ತೆ ಮತ್ತು ಹತ್ಯೆ ಮಾಡದಂತೆ ರಾಜ್ಯದ ರೇಡಿಯೋ ಮತ್ತು ಆಡಿಯೋ ಜಿಂಗಲ್ಸ್ ಗಳ ಮುಖಾಂತರ ಪ್ರಚಾರ ಮಾಡುತ್ತಿದೆ. ಜಿಲ್ಲಾ ಮಟ್ಟದಲ್ಲಿ ಕಾರ್ಯಗಾರ, ಭಿತ್ತಿಪತ್ರ, ಕರಪತ್ರಗಳ ಮುಖಾಂತರ ಸಾರ್ವಜನಿಕರಲ್ಲಿ ಅರಿವು ಮೂಡಿಸಲಾಗುತ್ತಿದೆ.
- ಹೆಣ್ಣು ಭ್ರೂಣ ಪತ್ತೆ ಮತ್ತು ಹತ್ಯೆ ಮಾಡುವ ವೈದ್ಯರು, ಸ್ಕ್ಯಾನಿಂಗ್ ಸೆಂಟರ್‌ಗಳು, ಹಾಗೂ ಒತ್ತಾಯಿಸುವ ಗರ್ಭಿಣಿ ಸ್ತ್ರೀಯರ ಸಂಬಂಧಿಕರು ಮತ್ತು , ದಲ್ಲಾಳಿಗಳ ವಿರುದ್ಧ ಈಗಾಗಲೇ ಕಠಿಣ ಕ್ರಮ ಕೈಗೊಂಡಿದ್ದು, ಇನ್ನು ಹೆಚ್ಚಿನ ಪರಿಣಾಮಕಾರಿ ಅನುಷ್ಠಾನಕ್ಕಾಗಿ ಸಂಶಯಾಸ್ಪದ ವೈದ್ಯರು, ಸ್ಕ್ಯಾನಿಂಗ್ ಸೆಂಟರ್, ಗರ್ಭಿಣಿಯರ ಸಂಬಂಧಿಕರು ಹಾಗೂ ದಲ್ಲಾಳಿಗಳ ವಿರುದ್ಧ ತಾವುಗಳು ಗುಪ್ತ ಕಾರ್ಯಚರಣೆ ನಡೆಸಿ, ಕ್ರಮ ಕೈಗೊಳ್ಳಲು ಸಹಕರಿಸಲು ಕೋರಿದೆ. ಯಶ್ವಸಿಗೊಂಡ ಪ್ರತಿಯೊಂದು ಗುಪ್ತ ಕಾರ್ಯಚರಣೆಗೆ ಕರ್ನಾಟಕ ಸರ್ಕಾರದಿಂದ ರೂ.50,000/-ಗಳ ಬಹುಮಾನ ನೀಡಲು ತೀರ್ಮಾನಿಸಿದ್ದು, ಈ ನಿಟ್ಟಿನಲ್ಲಿ ಹೆಣ್ಣು ಮಕ್ಕಳ ಅನುಪಾತವನ್ನು ಹೆಚ್ಚಿಸಲು ಮತ್ತು ಈ ಮೂಲಕ ಸಮಾಜದ ಸ್ವಾಸ್ಥ್ಯಕಾಪಾಡಲು ಶ್ರಮಿಸಲಾಗುತ್ತದೆ..

RL 27.12.22

ಆಯುಕ್ತರು

ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸೇವೆಗಳು

ಬೆಂಗಳೂರು